ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟದ ಕುಸಿತ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

199(221) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಸುತ್ತಮುತ್ತಲಿ ನ ಪ್ರದೇಶಗಳಲ್ಲಿ ಅಂತರ್ಜಲ ಕುಸಿತದ ಕುರಿತು ಗಣಿ ಮತ್ತು ಭೂವಿಜ್ಞಾನ ಇಲಾಖಾವತಿಯಿಂದ ಯಾವುದಾದರೂ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಆ) ಈ ಪ್ರಸ್ತಾಪಿತ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಇ) ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವೈಜ್ಞಾನಿಕವಾಗಿ ಅಂತರ್ಜಲ ಮಟ್ಟದ ಸಮೀಕ್ಷೆ ನಡೆಸಲು ಯಾವುದಾದರೂ ವೈಜ್ಞಾನಿಕ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆಯೇ; ಅಥವಾ ಮಾಡಿಕೊಳ್ಳಲು ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಈ) ಅಂತರ್ಜಲ ಕುಸಿತದ ಕಾರಣಗಳನ್ನು ಪತ್ತೆ ಹಚ್ಚುವ ಮತ್ತು ಅದಕ್ಕೆ ಪೂರಕವಾಗಿ ಕ್ರಮ ಕೈಗೊಳ್ಳುವ ನಿಯಮಗಳನ್ನು ಸರ್ಕಾರವು ಜಾರಿಗೊಳಿಸಲಾಗಿದೆಯೇ; ಅಥವಾ ಪ್ರಸ್ತುತ ಪರಿಸ್ಥಿತಿಗೆ ಅನುಗುಣವಾಗಿ ಜಾರಿಯಲ್ಲಿರುವ ನಿಯಮಗಳಿಗೆ ತಿದ್ದುಪಡಿ ತರುವ ಚಿಂತನೆ ನಡೆಸಲಾಗಿದೆಯೇ ? (ವಿವರ ನೀಡುವುದು)